ತಾವು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ಅಂದರೆ, ಎ. .ಡಿ.ಆರ್. . ಯೋಜನೆಗೆ ಸಂಬಂಧಪಟ್ಟಂತೆ ಇನ್ನು ಆರು ತಿಂಗಳಲ್ಲಿ 50 ಪರ್ಸೆಂಟ್ ಕಾಮಗಾರಿಗಳನ್ನು ಪೂರ್ತಿಗೊಳಿಸಬೇಕೆಂಬುದು ನನ್ನ ಪ್ರಶ್ನೆಯಾಗಿದೆ. ಮತ್ತೆ ಎರಡನೆಯದಾಗಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೂರಲ್ , ೀಡರ್ ವ್ಯವಸ್ಥೆ ಇದ್ದು, ಇದನ್ನು ಅರ್ಬನ್ , ೀಡರ್ ನಿಟ್ಟಿನಲ್ಲಿ ಮಾಡಬೇಕು ಎನ್ನುತಕ್ಕಂಥದು ನಮ್ಮೆಲ್ಲರ ಅಭಿಪ್ರಾಯವಾಗಿದೆ. ಇಲ್ಲದಿದ್ದರೆ 3 ಫೇಸ್‌ನಲ್ಲಿ ಕರೆಂಟು ಕೊಡುವುದಕ್ಕೆ ಸಾಧ್ಯವಾಗುವುದಿಲ್ಲ. ಆದ್ದರಿಂದ 3 ಫೇಸ್‌ನ ಮೂಲಕ ಕರೆಂಟ್ ಕೊಡತಕ್ಕಂಥ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯನ್ನು ಅರ್ಬನ್ , ೀಡರ್ ಆಗಿ ಪರಿವರ್ತನೆ ಮಾಡುತ್ತೀರಾ?

ಶ್ರೀ .ಜಿ.ಆರ್. ಸಿಂಧ್ಯಾ:– ಮಾನ್ಯ ಅಧ್ಯಕ್ಷರೆ, ಈಗ ಎಲ್ಲಾ ರೂರಲ್ , ೀಡರ್‌ಗಳನ್ನು ಅರ್ಬನ್ , ೀಡರ್ ಆಗಿ ಬದಲಾವಣೆ ಮಾಡುವುದಕ್ಕೆ ಹೆಚ್ಚಿನ ಹಣ ಬೇಕಾಗುತ್ತದೆ ಎನ್ನುತಕ್ಕಂಥದು ಮಾನ್ಯ ಗೌರವಾನ್ವಿತ ಸದಸ್ಯರಿಗೂ ಕೂಡ ಗೊತ್ತಿದೆ. ಆದರೆ. depending on the consumption and also demand ಈಗ ಎಲ್ಲೆಲ್ಲಿ ಮಾಡುವುದಕ್ಕೆ ಸಾಧ್ಯವಿದೆಯೋ ಅಲ್ಲೆಲ್ಲ ಮಾಡುವುದಕ್ಕೆ ನಾವು ಪ್ರಯತ್ನ ಮಾಡುತ್ತೇವೆ.

ಅಧ್ಯಕ್ಷರು:– ಈಗ ಲಿಖಿತದ ಮೂಲಕ ಉತ್ತರಿಸುವ ಪ್ರಶ್ನೆಗಳು:–

ಶ್ರೀ .ಜಿ.ಆರ್. ಸಿಂಧ್ಯಾ (ಬೃಹತ್ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ 11.03.2005ರ 27ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 217 ಪ್ರಶ್ನೆಗಳ ಪೈಕಿ 154 ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಅಧ್ಯಕ್ಷರು:– ಈಗ ಶೂನ್ಯ ವೇಳೆ. ಮಾನ್ಯ ರಮೇಶ್ ಕುಮಾರ್‌ರವರು ಮತ್ತು ಮಾನ್ಯ ಮಾಧುಸ್ವಾಮಿಯವರು ಶೂನ್ಯ ವೇಳೆಯಲ್ಲಿ ಒಂದು ವಿಷಯ ಪ್ರಸ್ತಾಪ ಮಾಡಲು ನನಗೆ ಪತ್ರ ಕೊಟ್ಟಿದ್ದಾರೆ. ಮೊದಲಿಗೆ ಅವರಿಗೆ ಅವಕಾಶ ಕೊಡುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್:– ಮಾನ್ಯ ಅಧ್ಯಕ್ಷರೆ, ಹೈಕೋರ್ಟ್ ಸರ್ಕ್ಯೂಟ್ ಹೌಸ್ ಬಗ್ಗೆ ಪ್ರಸ್ತಾಪ ಮಾಡಬೇಕೆಂದು ನಾನು ತಮಗೆ ಪತ್ರ ಕಳುಹಿಸಿ ಕೊಟ್ಟಿದ್ದೇನೆ. ಆದ್ದರಿಂದ ನನಗೆ ಅವಕಾಶ ಕೊಡಿ.